ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ,ರೋಣ
ಸಿ ಸಿ ನಂಬರ :838/2025
CW-7 PW-3

ಹೆಸರು : ಯಲ್ಲಪ್ಪ ಗಜಕೋಶ
ತಂದೆಯ ಹೆಸರು : ಬಾಳಪ್ಪ
ವಯಸ್ಸು : 64 ವರ್ಷ
ಉದ್ಯೋಗ : ನಿವೃತ್ತ ಅಬಕಾರಿ ಉಪ ನಿರೀಕ್ಷಕರು
ವಾಸಸ್ಥಳ : ಬೆಂಗಳೂರು

---

ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 22-04-2026 ರಂದು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ದಿಃ 15-11-2012 ರಿಂದ 31-03-2023 ರ ವರೆಗೆ ಅಬಕಾರಿ ಉಪನಿರೀಕ್ಷಕರು ಅಂತಾ ರೋಣ ವಲಯ ದಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 19-05-2020 ರಂದು ನಾನು ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-1 ರವರಿಂದ ಪಡೆದಿದ್ದೇನೆ. ಅದೇ ದಿನ 2 ನೇ ಆರೋಪಿತನಿಗೆ ನೊಟೀಸ ನೀಡಿದ್ದೇನೆ. ದಿಃ 21-05-2020 ರಂದು 2 ನೇ ಆರೋಪಿತನು ಉತ್ತರ ನೀಡಿರುತ್ತಾನೆ. ಅದನ್ನು ಪಡೆದು ಕಡತಕ್ಕೆ ಅಳವಡಿಸಿದ್ದೇನೆ. ನಂತರ ದಿಃ 06-06-2020 ರಂದು ಚಾಸಾ-2 ರವರ ಮುಖಾಂತರ ರಾಸಾಯನಿಕ ಪರಿಕ್ಷೆಗಾಗಿ ಮು.ಮಾ ಅನ್ನು ಧಾರವಾಡಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ದಿಃ 08-06-2020 ರಂದು ಅವರಿಂದ ವರದಿ ಪಡೆದು ಕಡತಕ್ಕೆ ಅಳವಡಿಸಿದ್ದೇನೆ. ಅದೇ ದಿನ ಚಾಸಾ-2 ರವರ ಹೇಳಿಕೆ ಪಡೆದಿದ್ದೇನೆ. ದಿಃ 08-07-2020 ರಂದು ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷಾರೋಪಣ ಪತ್ರವನ್ನು ಸಲ್ಲಿಸಿದ್ದೇನೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಹಾಜರು ಇರುವ ಆರೋಪಿತರನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿಯು 2 ಲೀಟರ ಸಾಮರ್ಥ್ಯದ 2 ಪ್ಲಾಸಿಕ್ ಬಾಟಲಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಮು.ಮಾ-1 ಮತ್ತು 2 ಎಂದು ಗುರುತಿಸಲಾಗಿದೆ. ಸಾಕ್ಷಿಯು ದಿಃ 06-06-2020 ರ ಕೊರಿಕೆ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ-3 ಎಂದು, ಅದರ ಮೇಲಿರುವ ಸಾಕ್ಷಿ ಸಹಿಯನ್ನು ನಿ.ಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಎಫ್.ಎಸ್.ಎಲ್. ವರದಿಯನ್ನು ನೋಡಿ ಗುರುತಿಸಿದ್ದು, ಆರೋಪಿತನ ವಕೀಲರ ಸಮ್ಮತಿಯ ಮೇರೆಗೆ ಅದನ್ನು ನಿ.ಪಿ-4 ಎಂದು,

ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-4(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿಃ 19-05-2020 ರ ನೊಟೀಸಿನ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ-5 ಎಂದು, ಅದರ ಮೇಲಿರುವ ಸಾಕ್ಷಿ ಸಹಿಯನ್ನು ನಿ.ಪಿ-5(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿಃ 21-05-2020 ರ ಕಾಯಿದೆ ಶಿರ ಉತ್ತರ ನೋಟಿಸನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ-6 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದಃ</u>**

ನಾನು ಯಾವುದೇ ತನಿಖೆ ಮಾಡಿಲ್ಲ, ವರದಿಗಾಗಿ ಮು.ಮಾ ವನ್ನು ಕಳಿಸಿಲ್ಲ, ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ, ಆರೋಪಿತರು ಯಾವುದೇ ತಪ್ಪು ಮಾಡಿಲ್ಲ, ಠಾಣಾ ಅಂಕೆ- ಸಂಖ್ಯೆ ಗೊಸ್ಕರ ಸುಳ್ಳು ದೋಷಾರೋಪಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಹಾಗೂ ಮು.ಮಾ ಗೂ ಸಂಬಂದ ಇಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಅದೆ.

Sd/-
(ಹುಲುಗಪ್ಪ ಡಿ.)
ಪ್ರಧಾನ ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ
ನ್ಯಾಯಾಧೀಶರು ರೋಣ
(ಪೀಠಾಸಿನ ಗಜೇಂದ್ರಗಡ)